ದಿನಾಂಕ 25-07-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ : ವಾದಿ ಪರ ಶ್ರೀಮತಿ ಸ್ಟೆಲ್ಲಾ ವಕೀಲರಿಂದ</u>

ನನ್ನ ಮುಖ್ಯ ವಿಚಾರಣೆ ಭಾಗವಾಗಿ ಪ್ರಮಾಣ ಪತ್ರದ ಮೂಲಕ ನ್ಯಾಯಾಲಯದ ಮುಂದೆ ಸಲ್ಲಿಸಿರುತ್ತೇನೆ. ಸದರಿ, ಪ್ರಮಾಣ ಪತ್ರದಲ್ಲಿ ಬರೆದಿರುವ ವಿಷಯಗಳು ನಾನೇ ಬರೆಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದೇ. ನನ್ನ ದಾವೆಗೆ ಪೂರಕವಾಗಿ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ, ಅವುಗಳನ್ನು ಗುರುತಿಸುವಂತೆ ಕೋರುತ್ತೇನೆ.

1. ದೃಢೀಕರಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ. 1 ಎಂದು ಗುರುತಿಸಲಾಯಿತು.

2. ಹಕ್ಕು ಪತ್ರದ ದೃಢೀಕೃತ ನಕಲು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ. 2 ಎಂದು ಗುರುತಿಸಲಾಯಿತು.

3. ಮಾರುಕಟ್ಟೆ ಮೌಲ್ಯದ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ. 3 ಎಂದು ಗುರುತಿಸಲಾಯಿತು.

4. ಎರಡು ಕಂದಾಯ ಪಾವತಿ ರಶೀದಿಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿ.ಪಿ. 4 ಮತ್ತು 5 ಎಂದು ಗುರುತಿಸಲಾಯಿತು.

5. ನೋಟೀಸ್ ನ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ. 6 ಎಂದು ಗುರುತಿಸಲಾಯಿತು.

6. ಗ್ರಾ. ಪಂ. ಯವರಿಗೆ ನೀಡಿದ ಅರ್ಜಿಯ ಸ್ವೀಕೃತಿ ಹಾಜರುಪಡಿಸಿರುತ್ತೇನೆ. ಅದನ್ನು ನಿ.ಪಿ. 7 ಎಂದು ಗುರುತಿಸಲಾಯಿತು.

7. 2 ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿ.ಪಿ. 8 ಮತ್ತು 9 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ಸಲ್ಲಿಸಿದ ದಾವೆಯನ್ನು ಡಿಕ್ರಿ ಮಾಡುವಂತೆ ಕೋರುತ್ತೇನೆ.

ಪಾಟೀ ಸವಾಲು : ಶ್ರೀ. ಪಿ.ವೈ.ಪಿ ವಕೀಲರು ಹಾಜರಿದ್ದು, ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ. ಪ್ರತಿವಾದ ಪತ್ರ ಸಲ್ಲಿಸದೇ ಇರುವುದರಿಂದ ವಕೀಲರ ಪ್ರಾರ್ಥನೆಯನ್ನು ತಳ್ಳಿ ಹಾಕಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ. ಹೇ. ಕೇ. ಸರಿ ಇದೆ,

**ಸಿಜೆ** & ಜೆಎಂಎಫ್‌ಸಿ, ನ್ಯಾಯಾಲಯ, ಮಾನವಿ.